ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಗುರುವಾರ ದಿನಾಂಕ 26ನೇ ನವೆಂಬರ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ. ಕಾರಜೋಳ, ಹೆಚ್.ಡಿ. ಕುಮಾರಸ್ವಾಮಿ, ವೈ.ಎಸ್.ವಿ. ದತ್ತಾ, ಬಿ.ಆರ್. ಪಾಟೀಲ್, ಜಿ. ರಾಮಕೃಷ್ಣ ಮತ್ತು ಮಾಲಿಕಯ್ಯ ವಿ. ಗುತ್ತೇದಾರ್ ಹಾಗೂ ಇತರರು – ರಾಜ್ಯದಲ್ಲಿನ ಬರಗಾಲ, ರೈತರ ಸಂಕಷ್ಟಗಳ ಬಗ್ಗೆ ನಡೆಸಿದ ಚರ್ಚೆಗೆ ಸರ್ಕಾರದ ಉತ್ತರ.

2. ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ವಿ.ಸುನೀಲ್‌ಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಗೊವಿಂದ ಎಂ. ಕಾರಜೋಳ ಹಾಗೂ ಇತರರು – ರಾಜ್ಯದಲ್ಲಿ ಇತ್ತೀಚೆಗೆ ನಡೆದ ಕೊಲೆ, ಅತ್ಯಾಚಾರ, ಅಪಹರಣ, ದರೋಡೆ ಹಾಗೂ ಕೋಮು ಗಲಭೆಗಳಿಂದ ಅಮಾಯಕ ಜನರು ಮೃತಪಟ್ಟಿದ್ದು, ಕಾನೂನು ಸುವ್ಯವಸ್ಥೆ ಸಂಪೂರ್ಣ ಕುಸಿದಿರುವ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

2. ವಿತ್ತೀಯ ಕಾರ್ಯಕಲಾಪ

ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು) ಅವರು – 2015-16ನೇ ಸಾಲಿನ ಪೂರಕ ಅಂದಾಜುಗಳನ್ನು (ಎರಡನೇ ಕಂತು) ಮಂಡಿಸುವುದು.

3. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು – 2015-16ನೇ ಸಾಲಿನ ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಆರನೇ ವರದಿಯನ್ನೊಪ್ಪಿಸುವುದು.

ಪು.ತಿ.ನೋ

4. ಶಾಸನ ರಚನೆ

I.ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ)ವಿಧೇಯಕ, 2015
ಶ್ರೀ ಹೆಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-

ಅ)2015ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ತಿದ್ದುಪಡಿ)ವಿಧೇಯಕ, 2015
ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ)ವಿಧೇಯಕ, 2015
ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು) ಅವರು:-

ಅ)2015ನೇ ಸಾಲಿನ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ)ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಎಂಟನೇ ಹಾಗೂ ಒಂಬತ್ತನೇ ಪಟ್ಟಿಗಳ ರೀತ್ಯಾ.

6. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೊಂಬತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೊಂಬತ್ತನೇ ಪಟ್ಟಿ

7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್.ಸಿ. ಬಾಲಕೃಷ್ಣ, ಎಂ.ಟಿ. ಕೃಷ್ಣಪ್ಪ ಹಾಗೂ ಕೆ.ಎಸ್. ಮಂಜುನಾಥಗೌಡ ಅವರುಗಳು – ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕಿನ ಶಿವನಹಳ್ಳಿ ಗ್ರಾಮದಲ್ಲಿ ಬೆಂಗಳೂರು ಸಹಕಾರಿ ಹಾಲು ಒಕ್ಕೂಟದ ವತಿಯಿಂದ ಎನ್.ಡಿ.ಡಿ.ಬಿ.ಯಿಂದ ಫಿಜಿಬಲಿಟಿ ಹಾಗೂ ವಯಬಲಿಟಿ ರಿಪೋರ್ಟ್ ಪಡೆಯದೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಹಾಗೂ ದುಬಾರಿ ಬೆಲೆಯಲ್ಲಿ ಜಮೀನನ್ನು ಖರೀದಿಸಿ ಒಕ್ಕೂಟಕ್ಕೆ ಕೋಟ್ಯಾಂತರ ರೂಪಾಯಿಗಳ ಆರ್ಥಿಕ ನಷ್ಟವುಂಟು ಮಾಡಿರುವ ಬಗ್ಗೆ ಚರ್ಚಿಸುವುದು.

8. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎನ್. ಚಲುವರಾಯಸ್ವಾಮಿ ಅವರು – ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಚಿಣ್ಯ ಹೋಬಳಿಯ ಸೋಮನಹಳ್ಳಿಯಲ್ಲಿ ಮೊರಾರ್ಜಿ ವಸತಿ ಶಾಲೆಯ ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಎಸ್. ಪುಟ್ಟಣ್ಣಯ್ಯ ಅವರು – ಪಾಂಡವಪುರ ತಾಲ್ಲೂಕಿನ ತೊಣ್ಣೂರು ಕೆರೆ ಮತ್ತು ಮೇಲುಕೋಟೆ ಬೆಟ್ಟವನ್ನು ಪ್ರವಾಸೋದ್ಯಮವಾಗಿ ಸಮಗ್ರ ಅಭಿವೃದ್ಧಿಪಡಿಸಲು ಶಾಸಕರ ಅಧ್ಯಕ್ಷತೆಯಲ್ಲಿ ಮೇಲುಕೋಟೆ ಅಭಿವೃದ್ಧಿ ಪ್ರಾಧಿಕಾರವನ್ನು ಪುನರ್ ರಚಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

3. ಶ್ರೀ ಮಾಲಿಕಯ್ಯ ವಿ. ಗುತ್ತೇದಾರ್ ಅವರು – ಕಲಬುರುಗಿ ಜಿಲ್ಲೆಯ ಅಫಜಲ್‌ಪೂರ ತಾಲ್ಲೂಕಿನಲ್ಲಿ ತೀವ್ರ ಬರಗಾಲದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಪರಿಹಾರ ಒದಗಿಸಿಕೊಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

4. ಶ್ರೀ ವಿ. ಸುನಿಲ್‌ಕುಮಾರ್ ಅವರು – ರಾಜ್ಯ ವಿಮಾ ಯೋಜನೆ (ಇ.ಎಸ್.ಐ.)ಯಡಿ ನಗದು ರಹಿತ ಚಿಕಿತ್ಸೆ ಪಡೆಯುವಲ್ಲಿ ಕಾರ್ಮಿಕರಿಗೆ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀ ಜಿ.ಹೆಚ್. ಶ್ರೀನಿವಾಸ ಅವರು – ತರೀಕೆರೆ ವಿಧಾನಸಭಾ ಕ್ಷೇತ್ರದ ಕೆಮ್ಮಣ್ಣಗುಂಡಿ ಪ್ರವಾಸಿ ಮಂದಿರವನ್ನು ದುರಸ್ಥಿ ಮತ್ತು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

6. ಶ್ರೀ ಎನ್.ಹೆಚ್. ಕೋನರಡ್ಡಿ ಅವರು –ನವಲಗುಂದ ವಿಧಾನಸಭಾ ಕ್ಷೇತ್ರ ಹಾಗೂ ಧಾರವಾಡ ಜಿಲ್ಲೆಯ ಇತರ ಭಾಗಗಳಲ್ಲಿ ಸಿಡಿಲು ಮತ್ತು ಅತಿವೃಷ್ಟಿಯಿಂದ ನಾಶವಾಗಿರುವ ಈರುಳ್ಳಿ ಬೆಳೆಗೆ ಪರಿಹಾರ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

7. ಶ್ರೀ ಎನ್. ಚಲುವರಾಯಸ್ವಾಮಿ ಅವರು – ನಾಗಮಂಗಲ ಪಟ್ಟಣ ಪಂಚಾಯ್ತಿಯ ಸೂಪರ್ ಮಾರ್ಕೆಟ್ ಕಾಂಪ್ಲೆಕ್ಸ್‌ನ ಕಾಮಗಾರಿಯನ್ನು ಪೂರ್ಣಗೊಳಿಸಲು ಬೇಕಾಗಿರುವ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

8. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು – ಕಳೆದ ಮೂರು ತಿಂಗಳುಗಳಿಂದ ನಗರದ ಆಸ್ಪತ್ರೆಗಳಲ್ಲಿ ಇ.ಎಸ್.ಐ. ಕಾರ್ಡ್‌ದಾರರಿಗೆ ಚಿಕಿತ್ಸೆ ನೀಡದಿರುವುದರಿಂದ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

9. ಶ್ರೀ ಹೆಚ್.ಎಸ್. ಶಿವಶಂಕರ್ ಹಾಗೂ ಶ್ರೀ ಡಿ.ಜಿ. ಶಾಂತನಗೌಡ ಅವರು – ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕಿನಲ್ಲಿ ಹಾದುಹೋಗುವ ಶಿವಮೊಗ್ಗ–ಹೊಸಪೇಟೆ ರಾಜ್ಯ ಹೆದ್ದಾರಿ–25ನ್ನು ತುರ್ತಾಗಿ ದುರಸ್ಥಿಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು – ಹಾಸನ ಜಿಲ್ಲೆ, ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಕಾಡಾನೆಗಳ ಹಾವಳಿಯಿಂದ ಬೆಳೆ ಹಾಗೂ ಪ್ರಾಣ ಹಾನಿಯಾಗಿದ್ದು, ಬೆಳೆಗಾರರ ಜಮೀನಿಗೆ ಸೋಲಾರ್ ಬೇಲಿ ನಿರ್ಮಿಸಲು ಸಬ್ಸಿಡಿ ಹಣ ಬಿಡುಗಡೆ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

11. ಶ್ರೀ ಗುರುಪಾಟೀಲ ಶಿರವಾಳ ಅವರು – ಯಾದಗಿರಿ ಜಿಲ್ಲೆ ಶಹಪುರ ಮತಕ್ಷೇತ್ರದ ಬೆಂಗಳೂರು ಮುಖ್ಯ ರಸ್ತೆಯಿಂದ ಮುಡಬೋಳ ರಸ್ತೆಯ ಕಳಪೆ ಕಾಮಗಾರಿಗೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳುವ ಹಾಗೂ ಸದರಿ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

12. ಶ್ರೀ ಸಿ.ಬಿ. ಸುರೇಶ್ ಬಾಬು ಅವರು – ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಜಾನಕಲ್ಲು ಗ್ರಾಮದಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿರುವ ಇಲಾಖಾ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

13. ಶ್ರೀ ಬಿ. ಸುರೇಶ್‌ಗೌಡ ಅವರು – ತುಮಕೂರು ಗ್ರಾಮಾಂತರ ಕ್ಷೇತ್ರದ ನಾಗವಲ್ಲಿ ಹಾಗೂ ಯಲ್ಲಾಪುರ ಗ್ರಾಮಗಳ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ಕೊಠಡಿಗಳಿಲ್ಲದೆ ತೊಂದರೆಯಾಗಿರುವುದರಿಂದ, ತುರ್ತಾಗಿ ಕೊಠಡಿಗಳನ್ನು ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

14. ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾ ಸಾಹೇಬ ಅವರು – ನಿಪ್ಪಾಣಿ ಮತ ಕ್ಷೇತ್ರದ ಮಾಂಗೂರ ಗ್ರಾಮದಲ್ಲಿ ಇತ್ತೀಚೆಗೆ ಬೆಂಕಿ ಆಕಸ್ಮಿಕದಿಂದ ಆಹುತಿಯಾದ ಜಾನುವಾರುಗಳ ಮಾಲೀಕರಿಗೆ ಅಗತ್ಯ ಪರಿಹಾರವನ್ನು ನೀಡುವ ಬಗ್ಗೆ ಮಾನ್ಯ ಪಶುಸಂಗೋಪನೆ ಹಾಗೂ ರೇಷ್ಮೆ ರಾಜ್ಯ ಸಚಿವರ ಗಮನ ಸೆಳೆಯುವುದು.

15. ಡಾ: ಎ.ಬಿ. ಮಾಲಕರೆಡ್ಡಿ ಅವರು– ಯಾದಗಿರಿ ಜಿಲ್ಲೆಯ ರೈತರು ಬೆಳೆದಿರುವ ಬೆಳೆಗಳು ಬರದಿಂದ ಹಾಳಾಗಿ ಸಂಕಷ್ಟಕ್ಕೆ ಸಿಲುಕಿರುವುದರಿಂದ ಬರ ಪರಿಹಾರ ನೀಡುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

16. ಶ್ರೀ ಕೆ.ಎಸ್. ಮಂಜುನಾಥಗೌಡ ಅವರು – ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನಲ್ಲಿ ಕೈಗಾರಿಕಾ ವಲಯ ಸ್ಥಾಪನೆಯಿಂದ ವಾಹನಗಳ ಸಂಚಾರ ಹೆಚ್ಚಾಗಿ ಗ್ರಾಮಾಂತರ ಪ್ರದೇಶದ ರಸ್ತೆಗಳು ಹಾಳಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಬೃಹತ್ ಮತ್ತ ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

17. ಶ್ರೀ ಕೆ.ಜಿ. ಬೋಪಯ್ಯ ಅವರು – ಕೊಡಗು ಜಿಲ್ಲೆ ಮಡಿಕೇರಿ ತಾಲ್ಲೂಕು ಭಾಗಮಂಡಲದಲ್ಲಿ ಬಾಡಿಗೆ ಕಟ್ಟಡದಲ್ಲಿ ನಡೆಸುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಅಟಲ್‌ಜಿ ಆಂಗ್ಲ ಮಾಧ್ಯಮ ಶಾಲೆಯ ನೂತನ ಕಟ್ಟಡದ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

18. ಶ್ರೀ ಎಂ.ಟಿ. ಕೃಷ್ಣಪ್ಪ ಅವರು – ರಾಜ್ಯದಲ್ಲಿ ಕೃಷಿ ಆಧಾರಿತ ಬೆಳೆಗಳಿಗೆ ಖಾಸಗಿ ವಿಮಾ ಕಂಪನಿಗಳು ರೈತರಿಂದ ಕೋಟ್ಯಾಂತರ ವಿಮೆ ಪ್ರೀಮಿಯಂ ಪಡೆದಿದ್ದು, ಬೆಳೆಗಳು ಸಂಪೂರ್ಣ ನಾಶವಾಗಿದ್ದರೂ ರೈತರಿಗೆ ಅಲ್ಪ ಪ್ರಮಾಣದಲ್ಲಿ ಪರಿಹಾರವನ್ನು ನೀಡುತ್ತಿರುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

19. ಶ್ರೀ ಹೆಚ್.ಡಿ. ರೇವಣ್ಣ ಅವರು – ಹಾಸನ ಜಿಲ್ಲೆಯಲ್ಲಿ ಕಳಪೆ ಆಲೂಗೆಡ್ಡೆ ಬಿತ್ತನೆ ಬೀಜವನ್ನು ಮಾರಾಟ ಮಾಡಿ ರೈತರಿಗೆ ವಂಚನೆ ಮಾಡಿರುವವರೊಂದಿಗೆ ಶಾಮೀಲಾಗಿರುವ ತೋಟಗಾರಿಕೆ ಇಲಾಖೆಯ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಆಲೂಗೆಡ್ಡೆ ಹಾನಿಯಿಂದ ಆರ್ಥಿಕ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

20. ಶ್ರೀ ಬಿ.ಎನ್. ವಿಜಯಕುಮಾರ್ ಅವರು – ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಬರುವ ಆಸ್ತಿಗಳಿಗೆ ಟಿ.ಡಿ.ಆರ್. ಸೌಲಭ್ಯ ಸಂಬಂಧ ತನಿಖೆ ನಡೆಸಲು ಸಮಿತಿ ರಚಿಸಲಾಗುವುದೆಂದು ಭರವಸೆ ನೀಡಿರುವ ಕುರಿತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಬೆಂಗಳೂರು ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

9. ಅರ್ಧ ಗಂಟೆ ಕಾಲಾವಧಿ ಚರ್ಚೆ

1. **ಶ್ರೀ ಕೆ.ಆರ್. ರಮೇಶ್ ಕುಮಾರ್** ಅವರು – ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ವಾಸವಿರುವ ಚನ್ನಧಾಸರಿ /ಚನ್ನದಾಸ /ದೊಂಬಿದಾಸರಿ / ಮೊಸಲು/ ಗೋಳಪಿದಾಸರಿ/ದಾಸಯ್ಯ/ ದಾಸರು/ದಾಸ/ಬಡಗಜಂಗಮ/ಬೈರಾಗಿ/ಕೊಂಡರಾಜು ಇನ್ನಿತರೆಯವರಿಗೆ ಜಾತಿ ಪ್ರಮಾಣ ಪತ್ರ ನೀಡುವ ಮತ್ತು ದಾಖಲಿಸುವ ವಿಷಯಗಳಲ್ಲಿ ಉಂಟಾಗಿರುವ ತೊಂದರೆಗಳ ಬಗ್ಗೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. **ಶ್ರೀ ಎ.ಎಸ್. ಪಾಟೀಲ (ನಡಹಳ್ಳಿ)** ಅವರು – ವಿವಿಧ ಯೋಜನೆಗಳ ಅನುದಾನ ಬಿಡುಗಡೆ ಬಗ್ಗೆ ದಿನಾಂಕ:19.11.2015 ರಂದು ಸದನದಲ್ಲಿ ಉತ್ತರಿಸುವ 24ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 351(4437)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3. **ಶ್ರೀ ಬಸವರಾಜ ಬೊಮ್ಮಾಯಿ ಅವರು** – ರಾಜ್ಯ ಸರ್ಕಾರವು ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಕೈಗೊಂಡ ಕ್ರಮಗಳ ಕುರಿತು ದಿನಾಂಕ: 19.11.2015 ರಂದು ಸದನದಲ್ಲಿ ಉತ್ತರಿಸುವ 24ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ:352(4075)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4. **ಶ್ರೀ ಪಿಳ್ಳಮುನಿಶಾಮಪ್ಪ ಅವರು** – ವಿದ್ಯುತ್ ಅಭಾವದಿಂದ ರೈತರ ಆತ್ಮಹತ್ಯೆ ಕುರಿತು ದಿನಾಂಕ:20.11.2015 ರಂದು ಸದನದಲ್ಲಿ ಉತ್ತರಿಸುವ 25ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ:366(5009)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

5. **ಶ್ರೀ ಎಂ. ಕೃಷ್ಣಪ್ಪ ಅವರು** – ಎತ್ತಿನ ಹೊಳೆ ಯೋಜನೆ ಕುರಿತು ದಿನಾಂಕ:23.11.2015 ರಂದು ಸದನದಲ್ಲಿ ಉತ್ತರಿಸುವ 26ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ:389(5466)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

10. ಖಾಸಗಿ ಸದಸ್ಯರ ಕಾರ್ಯಕಲಾಪಗಳು

I. ಖಾಸಗಿ ನಿರ್ಣಯ

1. **ಶ್ರೀ ಎಂ.ಟಿ.ಕೃಷ್ಣಪ್ಪ, ಮಾನ್ಯ ವಿಧಾನಸಭಾ ಸದಸ್ಯರು** ಅವರು – ದಿನಾಂಕ: 02.07.2015ರಂದು "ಕರ್ನಾಟಕ ವಿಧಾನ ಪರಿಷತ್ತನ್ನು ರದ್ದುಪಡಿಸುವ ಬಗ್ಗೆ" ಮಂಡಿಸಿದ್ದ ಖಾಸಗಿ ನಿರ್ಣಯವನ್ನು ಹಿಂಪಡೆಯಲು ಪ್ರಸ್ತಾವ ಮಂಡಿಸುವುದು.

2. **ಶ್ರೀ ಕೆ. ಗೋಪಾಲಯ್ಯ, ಶ್ರೀ ಹೆಚ್.ಸಿ. ಬಾಲಕೃಷ್ಣ ಮತ್ತು ಶ್ರೀ ಹೆಚ್.ಡಿ. ರೇವಣ್ಣ** ಅವರುಗಳು – ಈ ಕೆಳಕಂಡ ನಿರ್ಣಯವನ್ನು ಮಂಡಿಸುವುದು.

   "ಕೆಂಪೇಗೌಡ ಸ್ಮಾರಕ ಅಭಿವೃದ್ಧಿ ಪ್ರಾಧಿಕಾರ
   ರಚಿಸಬೇಕೆಂದು ಈ ಸದನವು ನಿರ್ಣಯಿಸುತ್ತದೆ."

3. **ಶ್ರೀ ಪಿ.ಆರ್. ಸುಧಾಕರ್ ಲಾಲ್, ಮಾನ್ಯ ವಿಧಾನಸಭಾ ಸದಸ್ಯರು** – ಈ ಕೆಳಕಂಡ ನಿರ್ಣಯ ಮಂಡಿಸುವುದು

   "ಅಂಗವಿಕಲರಿಗೆ ಖಾಸಗಿ ವಲಯದ ಉದ್ಯೋಗಗಳಲ್ಲಿ
   ಮೀಸಲಾತಿ ಕಲ್ಪಿಸಲು ಹೊಸ ಶಾಸನವನ್ನು ರೂಪಿಸಬೇಕೆಂದು
   ಈ ಸದನವು ನಿರ್ಣಯಿಸುತ್ತದೆ."

II.ಖಾಸಗಿ ಸದಸ್ಯರ ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(i) ಕರ್ನಾಟಕ ರಾಜ್ಯ ವಿವಾಹ ವಿಧಿವಿಧಾನಗಳ ನಿಯಂತ್ರಣ ವಿಧೇಯಕ, 2015
(2015ರ ಖಾಸಗಿ ಸದಸ್ಯರ ವಿಧೇಯಕ-01)
ಶ್ರೀ ಕೆ.ಆರ್. ರಮೇಶ್ ಕುಮಾರ್ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ **ರಾಜ್ಯ ವಿವಾಹ ವಿಧಿವಿಧಾನಗಳ ನಿಯಂತ್ರಣ ವಿಧೇಯಕ (2015ರ ಖಾಸಗಿ ಸದಸ್ಯರ ವಿಧೇಯಕ-01)** ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(ii) ಕರ್ನಾಟಕ ಭೂ ಕಂದಾಯ (ಖಾಸಗಿ ಸದಸ್ಯರ ತಿದ್ದುಪಡಿ) ವಿಧೇಯಕ, 2015
(2015ರ ಖಾಸಗಿ ಸದಸ್ಯರ ವಿಧೇಯಕ-02)
ಶ್ರೀ ಕೆ. ಶಿವಮೂರ್ತಿ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ **ಭೂ ಕಂದಾಯ (2015ರ ಖಾಸಗಿ ಸದಸ್ಯರ ವಿಧೇಯಕ-02)** ವಿಧೇಯಕವನ್ನು ಮಂಡಿಸಲು ಪರ್ಯಾಲೋಚಿಸಬೇಕೆಂದು ಸೂಚಿಸುವುದು

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಎಸ್.ವೈ. ಕುಳಗೇರಿ
ಕಾರ್ಯದರ್ಶಿ(ಪ್ರ)

NR

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)